## ಹಿಂಬರಹ

ಸಂಖ್ಯೆ: ಡಿಟಿಇ 02 ಇಎಸ್‌ಟಿ(9) 2017 /4095 ದಿನಾಂಕ: 16-11-2017

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 105 ಸೇಅನೇ 2017 ಬೆಂಗಳೂರು ದಿನಾಂಕ:27.10.2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

V. Gov

ಸಹಾಯಕ ಆಡಳಿತಾಧಿಕಾರಿ

Sh-est(9) Endsmnt

13308

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 105 ಸೇಅನೇ 2017

ಕರ್ನಾಟಕ ಸರ್ಕಾರದ ಸಚಿವಾಲಯ.
ವಿಧಾನಸೌಧ,
ಬೆಂಗಳೂರು, ದಿನಾಂಕ: 27.10.2017.

**ಸುತ್ತೋಲೆ**

ವಿಷಯ: ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಕುರಿತು ಸ್ಪಷ್ಟೀಕರಣ.

****

ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು, 1996 ರನ್ವಯ ಸರ್ಕಾರಿ ನೌಕರರು ಸೇವೆಯಲ್ಲಿರುವಾಗಲೇ ಮೃತಪಟ್ಟಲ್ಲಿ ಅವರ ಅವಲಂಬಿತರಲ್ಲಿ ಅರ್ಹರಾದ ಒಬ್ಬರಿಗೆ, ನಿಯಮಗಳಲ್ಲಿ ನಿಗದಿಪಡಿಸಿರುವ ಷರತ್ತು ಮತ್ತು ನಿಬಂಧನೆಗಳನ್ನು ಪೂರೈಸಿದಲ್ಲಿ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಬಹುದಾಗಿದೆ. ಈ ನಿಯಮಗಳ ನಿಯಮ 4ರಲ್ಲಿ ಅನುಕಂಪದ ಆಧಾರದ ನೇಮಕಾತಿಗೆ ಷರತ್ತುಗಳನ್ನು ವಿಧಿಸಲಾಗಿದೆ. ಅನುಕಂಪದ ಆಧಾರದ ನೇಮಕಾತಿಯನ್ನು ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಬಹುದಾದಂಥ ಹುದ್ದೆಗಳನ್ನು ಹೊರತುಪಡಿಸಿ, ಕರ್ನಾಟಕ ಸರ್ಕಾರ ಸಚಿವಾಲಯದ ಸಹಾಯಕ ವೃಂದದ ವೇತನ ಶ್ರೇಣಿಯನ್ನು ಮೀರದ ಗರಿಷ್ಠ ಗ್ರೂಪ್ 'ಸಿ' ಹುದ್ದೆ, ಕನಿಷ್ಠ ಗ್ರೂಪ್ 'ಡಿ' ಹುದ್ದೆಗೆ ಅರ್ಜಿದಾರರ ವಿದ್ಯಾರ್ಹತೆಗನುಸಾರವಾಗಿ ಮಾಡಬಹುದಾಗಿದೆ. ಅದರಂತೆ, ಗ್ರೂಪ್ 'ಡಿ' ಹುದ್ದೆಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ. ಗ್ರೂಪ್ 'ಸಿ' ವೃಂದದ ದ್ವಿತೀಯ ದರ್ಜೆ ಸಹಾಯಕ/ಕಿರಿಯ ಸಹಾಯಕರ ಹುದ್ದೆಗೆ ಪದವಿ ಪೂರ್ವ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು, ಸಹಾಯಕ/ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ. ಆದರೆ, ಗ್ರೂಪ್ 'ಡಿ' ಹುದ್ದೆಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದ್ದರೂ ಸಹ, 1996ರ ನಿಯಮಗಳ ನಿಯಮ 4(3)ರ ಪರಂತುಕದನ್ವಯ ಅನುಕಂಪದ ಆಧಾರದ ನೇಮಕಾತಿಗೆ ಪರಿಗಣಿಸುವಲ್ಲಿ ಮಾತ್ರ ಗ್ರೂಪ್ 'ಡಿ' ಹುದ್ದೆಯ ನೇಮಕಾತಿಯ ವಿದ್ಯಾರ್ಹತೆಗೆ ವಿನಾಯಿತಿಯನ್ನು ನೀಡಲಾಗಿದೆ.

ಸರ್ಕಾರದ ಇಲಾಖೆಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಸಂಬಂಧಿಸಿದಂತೆ ಪ್ರಸ್ತುತ ಹಲವು ಪ್ರಕರಣಗಳಲ್ಲಿ ಅನುಕಂಪದ ಆಧಾರದ ನೇಮಕಾತಿ ಕೋರಿ ಅರ್ಜಿ ಸಲ್ಲಿಸುವ ಅರ್ಜಿದಾರರು ಉನ್ನತ ವಿದ್ಯಾರ್ಹತೆಯನ್ನು ಹೊಂದಿದ್ದರೂ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಒಂದು ವರ್ಷದ ಅವಧಿಯೊಳಗೆ ನಿಗದಿತ ವಿದ್ಯಾರ್ಹತೆ ಪಡೆದಿದ್ದರೂ ಸಹ ಗ್ರೂಪ್ 'ಸಿ' ವೃಂದದ ಹುದ್ದೆಗೆ ನೇಮಕಾತಿ ನೀಡದೇ ಗ್ರೂಪ್ 'ಡಿ' ವೃಂದದ ಹುದ್ದೆಗೆ ನೇಮಕಾತಿ ನೀಡಿ ಆದೇಶ ಹೊರಡಿಸಿರುವ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಅನುಕಂಪದ ಆಧಾರದ ನೇಮಕಾತಿ ನೀಡುವ ಸಂದರ್ಭದಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಕೋರಿ ಸಲ್ಲಿಸಿರುವ ಅರ್ಜಿದಾರರ ಅರ್ಜಿಯನ್ನು ಪರಿಗಣಿಸುವಲ್ಲಿ ಮೇಲೆ ತಿಳಿಸಿರುವಂತೆ ಅವರುಗಳು ಹೊಂದಿರುವ ವಿದ್ಯಾರ್ಹತೆಗೆ ಅನುಸಾರವಾಗಿಯೇ ಗ್ರೂಪ್ 'ಸಿ' ಅಥವಾ ಗ್ರೂಪ್ 'ಡಿ' ಹುದ್ದೆಗೆ ನೇಮಕಾತಿ ಆದೇಶ ಹೊರಡಿಸಬೇಕಾಗುತ್ತದೆ.

2...

ಅನುಕಂಪದ ಆಧಾರದ ನೇಮಕಾತಿಯನ್ನು ಮಾಡುವ ಎಲ್ಲಾ ಸಕ್ಷಮ ಪ್ರಾಧಿಕಾರಗಳು ಈ ಅಂಶವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

**ಪ್ರತಿ:**
1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ವಾರದ ರಾಜ್ಯಪತ್ರ.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)